ಅ) ರಂಗಸುಗ್ಗಿ ಯೋಜನೆಯಡಿ 1996-97ನೇ ಸಾಲಿನಿಂದ ಪ್ರತಿ ವರ್ಷ ಸುಗ್ಗಿ ಕಾಲದಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ಪೌರಾಣಿಕ ನಾಟಕ ಪ್ರದರ್ಶಿಸಲು ಪ್ರತಿ ನಾಟಕಕ್ಕೆ ರೂ.5,000-00 ಸಂಭಾವನೆ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

ಮಂಡ್ಯ ಜಿಲ್ಲೆಯಲ್ಲಿ ಮಿನಿ ವಿಧಾನ ಸೌಧ ನಿರ್ಮಾಣದ ಬಗ್ಗೆ

1662 (2432) ಶ್ರೀ ಎಂ.ಎಸ್.ಆತ್ಮಾನಂದ (ಮಂಡ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಲಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕು ಕ್ರೀಂದ್ರಗಳಲ್ಲಿ ಮಿನಿ ವಿಧಾನಸೌಧ ಕಟ್ಟಲಾಗುವುದು;

ಆ) ಮಂಡ್ಯದಲ್ಲಿ ಮಿನಿ ವಿಧಾನಸೌಧ ನಿರ್ಮಾಣದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲ, ಈ ದಿಶೆಯಲ್ಲಿ ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು).

ಅ) ಮಂಡ್ಯ ಜಿಲ್ಲೆಯ ಮದ್ದೂರು ಹಾಗೂ ಮಳವಳ್ಳಿ ತಾಲ್ಲೂಕುಗಳಲ್ಲಿ ಈಗಾಗಲೇ ಮಿನಿ ವಿಧಾನಸೌಧಗಳನ್ನು ಕಟ್ಟಲಾಗಿದೆ. ಪಾಂಡವಪುರ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಕಟ್ಟಡದ ನಿರ್ಮಾಣ ಪ್ರಗತಿಯಲ್ಲಿರುತ್ತದೆ. ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಕಂದಾಯ ಇಲಾಖೆಯಿಂದ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಲಾಗುತ್ತಿದೆ.

ಆ) ಸರ್ಕಾರದ ಗಮನಕ್ಕೆ ಬಂದಿದೆ.

ಇ) ಈ ಬಗ್ಗೆ ಕಂದಾಯ ಇಲಾಖೆಯಿದ ಪ್ರಸ್ತಾವನೆ ಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು.

ಅರಣ್ಯ ಅಭಿವೃದ್ಧಿ ನಿಗಮದಡಿ ರಚಿಸಲಾದ ನಿಗಮಗಳ ಬಗ್ಗೆ

1663 (2311) ಶ್ರೀ ಅಂಗಾರ ಎಸ್(ಸುಳ್ಯ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

1) ಕರ್ನಾಟಕ ರಾಜ್ಯದಲ್ಲಿ ಅರಣ್ಯ ಅಭಿವೃದ್ಧಿ ನಿಗಮದಡಿಯಲ್ಲಿ ಎಷ್ಟು ನಿಗಮಗಳನ್ನು ರಚಿಸಲಾಗಿದೆ; ಅವು ಯಾವುವು; 1995-99ರ ವರೆಗೆ ನಿಗಮದ ಆದಾಯ ಹಾಗೂ ಖರ್ಚು ಎಷ್ಟು (ವರ್ಷವಾರು, ನಿಗಮವಾರು ವಿವರ ನೀಡುವುದು?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು).

ಅ) ಕರ್ನಾಟಕ ರಾಜ್ಯದಲ್ಲಿ ಅರಣ್ಯ ಅಭಿವೃದ್ಧಿ ನಿಗಮದಡಿಯಲ್ಲಿ ಯಾವುದೇ ನಿಗಮವನ್ನು ರಚಿಸಿರುವುದಿಲ್ಲ. ಆದರೂ 1985 ರಲ್ಲಿ ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ಹಾಗೂ ಮೆ. ಹರಿಹರ ಫಾಲಿಫೈಬರ್ಸ್‌ರವರು ಕ್ರಮವಾಗಿ ಶೇ.51 ಹಾಗೂ 49ರ ಪ್ರಮಾಣದಲ್ಲಿ ಬಂಡವಾಳ